# Akashvani: Bangalore
# Regional Bulletin In Kannada
# 14.05.2026: 14.30hrs

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

**ಮುಖ್ಯಾಂಶಗಳು :**

1. ಮೈಸೂರಿನಲ್ಲಿ ಮುಖ್ಯಮಂತ್ರಿ ನಗರ ಪ್ರದಕ್ಷಿಣೆ; ವಿವಿಧ ಅಭಿವೃದ್ಧಿ ಕಾಮಗಾರಿಗಳ ಪರಿಶೀಲನೆ
2. ಬಿಡದಿ ಟೌನ್‌ಶಿಪ್ ಹೆಸರಿನಲ್ಲಿ ರಿಯಲ್ ಎಸ್ಟೇಟ್ ವ್ಯವಹಾರ; ಸರ್ಕಾರದ ವಿರುದ್ಧ ಕೇಂದ್ರ ಸಚಿವ ಕುಮಾರಸ್ವಾಮಿ ಅಸಮಾಧಾನ
3. ಇಂಧನ ಉಳಿಸಲು ಬೆಂಗಾವಲು ಪಡೆ ವಾಹನಗಳ ಸಂಖ್ಯೆ ಇಳಿಸಿದ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್
4. ಮಂಗಳೂರು ಆಕಾಶವಾಣಿ ಕೇಂದ್ರಕ್ಕೆ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಜಂಟಿ ಕಾರ್ಯದರ್ಶಿ ಪ್ರಿತುಲ್ ಕುಮಾರ್ ಭೇಟಿ

*********

ಮೈಸೂರಿನಲ್ಲಿಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿವಿಧ ಅಭಿವೃದ್ಧಿ ಕಾಮಗಾರಿಗಳ ಪರಿಶೀಲನೆ ನಡೆಸಿದರು. ಪ್ರಮುಖವಾಗಿ ನಗರ ವ್ಯಾಪ್ತಿಯಲ್ಲಿ ರಿಂಗ್ ರೋಡ್ ಒಳ ಭಾಗದಲ್ಲಿ ಹಾಲಿ ಇರುವ ೧೧ ಕಿಲೋವ್ಯಾಟ್ ಓವರ್ ಹೆಡ್ ವಿದ್ಯುತ್ ಮಾರ್ಗಗಳನ್ನು ಭೂಗತ ಕೇಬಲ್‌ನಿಂದ ಬದಲಾಯಿಸುವ ಕಾಮಗಾರಿಯನ್ನು ಪರಿಶೀಲನೆ ನಡೆಸಿದರು. ಈ ಕಾಮಗಾರಿಯ ಒಟ್ಟು ಕಾರ್ಯಾಪ್ರೇಷಣಾ ಮೊತ್ತ ೫೮೮.೨೪ ಕೋಟಿಗಳಾಗಿದೆ. ಕಾಮಗಾರಿಯನ್ನು ಪೂರ್ಣಗೊಳಿಸಲು ೨ ವರ್ಷ ಅವಧಿ ನಿಗದಿಪಡಿಸಲಾಗಿದೆ. ಈ ಸುಧಾರಿತ ಭೂಗತ ವಿದ್ಯುತ್ ವಿತರಣಾ ವ್ಯವಸ್ಥೆಯಿಂದ ಹೆಚ್ಚಿನ ವಿಶ್ವಾಸಾರ್ಹತೆ, ಕಡಿಮೆ ನಿರ್ವಹಣಾ ವೆಚ್ಚ, ಕಡಿಮೆ ವಿದ್ಯುತ್ ಅಡಚಣೆ, ನಗರದ ಸೌಂದರ್ಯ ಹೆಚ್ಚಿಸುವಿಕೆ, ಕಡಿಮೆ ಮರ ಕತ್ತರಿಸುವಿಕೆ, ಕಡಿಮೆ ವಿದ್ಯುತ್ ಅಪಘಾತಗಳು, ಸೇರಿದಂತೆ ಹಲವು ಪ್ರಯೋಜನವಾಗಲಿದೆ. ಬಳಿಕ ಮುಖ್ಯಮಂತ್ರಿ ಅವರು, ನಗರ ಪ್ರದಕ್ಷಿಣೆ ನಡೆಸಿ, ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಒಡಂಬಡಿಕೆಯಿಂದ ನಡೆಯುತ್ತಿರುವ ಅಭಿವೃದ್ಧಿ ಕಾಮಗಾರಿಗಳ ಪರಿಶೀಲನೆ ನಡೆಸಿದರು. ವಿಧಾನಸಭಾ ಕ್ಷೇತ್ರಗಳಲ್ಲಿ ಪ್ರಗತಿಯಲ್ಲಿರುವ ಅಭಿವೃದ್ಧಿ ಕಾರ್ಯಗಳ ಪರಿವೀಕ್ಷಣೆ ನಡೆಸಿದ ಅವರು, ಮಾನಂದವಾಡಿ ರಸ್ತೆಯ ಎನ್‌ಐ ಕಾಲೇಜಿನ ರಸ್ತೆಯಲ್ಲಿ ಲೋಕೋಪಯೋಗಿ ಇಲಾಖೆಯಿಂದ ನಡೆಯುತ್ತಿರುವ ವೈಟ್ ಟಾಪಿಂಗ್ ಕಾಮಗಾರಿಯನ್ನು ವೀಕ್ಷಿಸಿದರು. ಕಾಮಗಾರಿ ಪರಿಶೀಲನೆ ವೇಳೆ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಸಿ. ಮಹದೇವಪ್ಪ, ಶಾಸಕರಾದ ಹರೀಶ್ ಗೌಡ, ಶ್ರೀವತ್ಸ ಹಾಗೂ ಪರಿಷತ್ ಸದಸ್ಯ ಡಾ. ಯತಿಂದ್ರ ಸಿದ್ದರಾಮಯ್ಯ ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

*********

ಬಿಡದಿ ಟೌನ್‌ಶಿಪ್ ಹೆಸರಿನಲ್ಲಿ ರಾಜ್ಯ ಸರ್ಕಾರ ರಿಯಲ್ ಎಸ್ಟೇಟ್ ವ್ಯವಹಾರ ನಡೆಸಲು ನಿರ್ಧರಿಸಿದೆ ಎಂದು ಕೇಂದ್ರ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಸಚಿವ ಎಚ್.ಡಿ. ಕುಮಾರಸ್ವಾಮಿ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಡದಿ ಟೌನ್‌ಶಿಪ್‌ನಲ್ಲಿ ನಿವೇಶನ ಮಾರಾಟ, ತೆರಿಗೆ, ಮತ್ತಿತರ ಮೂಲಗಳಿಂದ ೧೫ ವರ್ಷಗಳಲ್ಲಿ ೩೩ ಸಾವಿರ ಕೋಟಿ ರೂಪಾಯಿ ಆದಾಯ ಬರಲಿದೆ ಎಂದು ಅಧ್ಯಯನ ವರದಿಯಲ್ಲಿ ಉಲ್ಲೇಖಿಸಲಾಗಿದೆ ಎಂದು ಹೇಳಿದ್ದಾರೆ. ಬಿಡದಿ ಟೌನ್‌ಶಿಪ್

ಯೋಜನೆಯಲ್ಲಿ ಸಾವಿರಾರು ಎಕರೆ ಭೂ ಕಬಳಿಕೆಯಾಗುತ್ತಿದ್ದು, ಸಾಲು ಸಾಲು ಅಕ್ರಮಗಳು ನಡೆಯುತ್ತಿವೆ ಎಂದು ದೂರಿದ್ದಾರೆ. ಈ ಹಿಂದೆ ೨ ಸಾವಿರದ ೩೨೦ ಎಕರೆ ಸರ್ಕಾರಿ ಜಮೀನು ಇದೆ ಎಂದು ಉಲ್ಲೇಖಿಸಲಾಗಿದ್ದು, ಈಗ ಅಧಿಸೂಚನೆಯಲ್ಲಿ ೭೫೦ ಎಕರೆ ಸರ್ಕಾರಿ ಜಮೀನು ಇದೆ ಎಂದು ಉಲ್ಲೇಖಿಸಲಾಗಿದೆ. ಉಳಿದ ಜಮೀನು ಏನಾಯಿತು ಎಂದು ಸರ್ಕಾರವನ್ನು ಪ್ರಶ್ನಿಸಿದ್ದಾರೆ.

*********

ಪ್ರಾಥಮಿಕ ತರಗತಿಯಿಂದ ೧೨ ನೇ ತರಗತಿಯವರೆಗೆ ವಿದ್ಯಾರ್ಥಿಗಳು ಜನಿವಾರ, ಹಿಜಾಬ್, ರುದ್ರಾಕ್ಷಿ ಹಾಕಿಕೊಳ್ಳಬಹುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಮೈಸೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಾಂಪ್ರದಾಯಿಕವಾಗಿ ಅನುಸರಿಸುವ ಧಾರ್ಮಿಕ ಸಂಕೇತಗಳನ್ನು ಧರಿಸಬಹುದೇ ಹೊರತು ಹೊಸದಾಗಿ ಮಾಡುವಂತಿಲ್ಲ ಎಂದು ಬಿಜೆಪಿ ನಾಯಕರ ಆರೋಪಕ್ಕೆ ಪ್ರತಿಕ್ರಿಯಿಸಿದ್ದಾರೆ. ಇದೇ ವೇಳೆ, ಪ್ರಧಾನಿ ಡೀಸೆಲ್ ಬಳಕೆ ಕಡಿತಗೊಳಿಸಲು ಕರೆ ನೀಡಿರುವ ಕುರಿತಂತೆ ಪ್ರತಿಕ್ರಿಯಿಸಿ, ಇದು ಕೇವಲ ತಾತ್ಕಾಲಿಕ ಕ್ರಮವಷ್ಟೇ ಎಂದು ತಿಳಿಸಿದ್ದಾರೆ. ಶೀಘ್ರವೇ ಸಂಪುಟ ಪುನರ್ ರಚನೆ ಮಾಡುವ ಉದ್ದೇಶವಿದೆ ಎಂದು ಸ್ಪಷ್ಟಪಡಿಸಿದ್ದಾರೆ. ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿರುವ ಬಗ್ಗೆ ಮಾತನಾಡಿದ ಅವರು, ಇದರಿಂದ ವಿದ್ಯಾರ್ಥಿಗಳಿಗೆ ಅನ್ಯಾಯವಾಗಿದೆ ಎಂದು ಹೇಳಿದ್ದಾರೆ.

*********

ವಾಹನ ಮಿತವಾಗಿ ಬಳಸಿ, ಇಂಧನ ಉಳಿಸುವಂತೆ ಪ್ರಧಾನಿ ನರೇಂದ್ರ ಮೋದಿ ಮಾಡಿದ ಮನವಿಯನ್ನು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ತಮ್ಮ ಅಧಿಕೃತ ಬೆಂಗಾವಲು ಪಡೆಯ ವಾಹನಗಳ ಸಂಖ್ಯೆಯನ್ನು ಕಡಿಮೆ ಮಾಡುವ ಮೂಲಕ ಅನುಸರಣೆ ಮಾಡಿದ್ದಾರೆ. ಈ ಹಿಂದೆ ರಾಜ್ಯಪಾಲರು ಸಂಚರಿಸುವ ಸಂದರ್ಭದಲ್ಲಿ ಹಲವು ಶಿಷ್ಟಾಚಾರ ವಾಹನಗಳು ಪ್ರಯಾಣಿಸುತ್ತಿದ್ದವು. ಈಗ ಅಗತ್ಯವಿರುವ ಶಿಷ್ಟಾಚಾರ ವಾಹನಗಳನ್ನು ಮಾತ್ರ ಉಳಿಸಿಕೊಂಡು ಪರಿಷ್ಕೃತ ವ್ಯವಸ್ಥೆ ಜಾರಿಗೆ ತರಲಾಗಿದೆ.

*********

ಸಾರ್ವಜನಿಕರಿಗೆ ಸರ್ಕಾರದ ಸೌಲಭ್ಯಗಳನ್ನು ತಲುಪಿಸುವುದು ಮತ್ತು ಅದರ ಬಗ್ಗೆ ಅರಿವು ಮೂಡಿಸುವುದು ಪ್ರತಿ ಒಬ್ಬ ಸರ್ಕಾರಿ ನೌಕರರ ಜವಾಬ್ದಾರಿಯಾಗಿದೆ ಎಂದು ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ತಿಳಿಸಿದ್ದಾರೆ. ಮಂಡ್ಯದಲ್ಲಿ ಆಯೋಜಿಸಿದ್ದ ಸರ್ಕಾರಿ ನೌಕರರ ದಿನಾಚರಣೆ, ನಾಗರಿಕ ಸೇವಾ ದಿನಾಚರಣೆ, ಸರ್ವೋತ್ತಮ ಸೇವಾ ಪ್ರಶಸ್ತಿ ಪ್ರದಾನ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಜಿಲ್ಲೆಯ ಅಭಿವೃದ್ಧಿಗಾಗಿ ಸರ್ಕಾರಿ ನೌಕರರು ಕಾರ್ಯನಿರ್ವಹಿಸಬೇಕು ಎಂದು ಕರೆ ನೀಡಿದ್ದಾರೆ.

*********

ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಜಂಟಿ ಕಾರ್ಯದರ್ಶಿ ಪ್ರಿತುಲ್ ಕುಮಾರ್, ಮಂಗಳೂರು ಆಕಾಶವಾಣಿ ಕೇಂದ್ರಕ್ಕೆ ಇಂದು ಭೇಟಿ ನೀಡಿ ಅಧಿಕಾರಿಗಳು ಹಾಗೂ ಸಿಬ್ಬಂದಿಯೊಂದಿಗೆ ಸಮಾಲೋಚನೆ ನಡೆಸಿದರು. ಆಕಾಶವಾಣಿಯ ವಿವಿಧ ವಿಭಾಗಗಳನ್ನು ಸಂದರ್ಶಿಸಿದ ಅವರು ಪರಿಶೀಲನೆ ನಡೆಸಿದರು. ಇದೇ ವೇಳೆ ಕೇಂದ್ರ ಸಂವಹನ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಯೊಂದಿಗೆ ಸಮಾಲೋಚನೆ ನಡೆಸಿದರು. ಈ ಸಂದರ್ಭದಲ್ಲಿ ಆಕಾಶವಾಣಿಯ ಉಪ ಮಹಾನಿರ್ದೇಶಕ ಸಂಜೀವ್, ಕಾರ್ಯಕ್ರಮ ವಿಭಾಗದ ನೂತನ್, ಮಂಗಳೂರು ಆಕಾಶವಾಣಿ ಕಾರ್ಯಕ್ರಮ ವಿಭಾಗದ ಮುಖ್ಯಸ್ಥ ಪ್ರಶಾಂತ್ ಕುಮಾರ್, ಇಂಜಿನಿಯರ್ ವಿಭಾಗದ ಮುಖ್ಯಸ್ಥ ಬಾಬು ಪಟ್ಟವತಿ ಉಪಸ್ಥಿತರಿದ್ದರು.

*********

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣವಾಗಿ ಕುಸಿದಿದ್ದು, ಎನ್‌ಸಿಆರ್‌ಬಿ ಅಂಕಿ-ಅಂಶಗಳೇ ಇದಕ್ಕೆ ಸಾಕ್ಷಿ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ತಿಳಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಕರ್ನಾಟಕ ಕಾಂಗ್ರೆಸ್ ಆಡಳಿತದಲ್ಲಿ ಅಪರಾಧಿಗಳ ಸ್ವರ್ಗವಾಗಿ ಬದಲಾಗುತ್ತಿದೆ ಎಂದು ಆರೋಪಿಸಿದ್ದಾರೆ. ಬೆಂಗಳೂರು ಜಾಗತಿಕ ಹೂಡಿಕೆ, ತಂತ್ರಜ್ಞಾನ ಮತ್ತು ಉದ್ಯೋಗಗಳ ಕೇಂದ್ರವಾಗಬೇಕಿತ್ತು. ಆದರೆ ಸರ್ಕಾರದ ನಿರ್ಲಕ್ಷ್ಯದಿಂದ ಇಂದು ಮಾದಕದ್ರವ್ಯ ಹಾಗೂ ಸೈಬರ್ ಕ್ರೈಮ್‌ಗಳ ರಾಜಧಾನಿಯಾಗಿ ಮಾರ್ಪಾಡಾಗುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

*********

ಪ್ರಸಕ್ತ ಸಾಲಿನ ಮುಂಗಾರು ಅವಧಿಯಲ್ಲಿ ಉತ್ತರ ಕನ್ನಡ ಜಿಲ್ಲೆಯಲ್ಲಿ ಗುಡ್ಡ ಕುಸಿತ ಮತ್ತು ನೆರೆಯಿಂದ ಯಾವುದೇ ಅನಾಹುತಗಳಾಗದಂತೆ ಅಗತ್ಯವಿರುವ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಪ್ರಸಕ್ತ ಸಾಲಿನ ಮುಂಗಾರು ಸಿದ್ಧತೆ ಕುರಿತು ಕೈಗೊಂಡಿರುವ ಕ್ರಮಗಳ ಕುರಿತು ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮಳೆಗಾಲದಲ್ಲಿ ಸಾರ್ವಜನಿಕರ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸಲು ಅನುಕೂಲವಾಗುವಂತೆ ಎಲ್ಲಾ ತಹಶೀಲ್ದಾರ ಕಚೇರಿಗಳಲ್ಲಿ ದಿನದ ೨೪ ಗಂಟೆ ಕಾರ್ಯನಿರ್ವಹಿಸುವ ಕಂಟ್ರೋಲ್ ರೂಂ ತೆರೆಯುವಂತೆ ಸೂಚಿಸಿದ್ದಾರೆ. ಜಿಲ್ಲಾಧಿಕಾರಿ ಕಚೇರಿಯಲ್ಲಿನ ಜಿಲ್ಲಾ ತುರ್ತು ಕಾರ್ಯಚರಣೆ ಕೇಂದ್ರದಲ್ಲಿ ಪೊಲೀಸ್, ಅಗ್ನಿಶಾಮಕ, ಅರಣ್ಯ, ಹೆಸ್ಕಾಂ, ಬಿ.ಎಸ್.ಎನ್.ಎಲ್ ಕಚೇರಿಯ ಸಿಬ್ಬಂದಿಗಳನ್ನು ಕರ್ತವ್ಯಕ್ಕೆ ನಿಯೋಜಿಸುವಂತೆ ತಿಳಿಸಿದ್ದಾರೆ. ಹೆದ್ದಾರಿಯಲ್ಲಿನ ಅಪಾಯಕಾರಿ ಪ್ರದೇಶಗಳಲ್ಲಿ ಸೂಕ್ತ ಎಚ್ಚರಿಕೆ ಫಲಕ, ಬ್ಯಾರಿಕೇಡ್ ಸೇರಿದಂತೆ ಅಗತ್ಯ ರಕ್ಷಣಾ ಕ್ರಮಗಳನ್ನು ಕೈಗೊಳ್ಳುವಂತೆ ನಿರ್ದೇಶನ ನೀಡಿದ್ದಾರೆ.

*********

ಆಕಾಶವಾಣಿ ೯೦ರ ವರ್ಷಾಚರಣೆ ಅಂಗವಾಗಿ ಕಾರವಾರ ಆಕಾಶವಾಣಿ ಹಾಗೂ ರೋಟರಿ ಕ್ಲಬ್ ಮತ್ತು ಅವರ್ ಸೋಷಿಯಲ್ ಗುಡ್ ಸಹಯೋಗದಲ್ಲಿ ಇದೇ ೧೫ ರಂದು ಬೆಳಗ್ಗೆ ೭ ಗಂಟೆಗೆ ಕಾರವಾರದ ರವೀಂದ್ರನಾಥ ಟಾಗೋರ್ ಕಡಲತೀರದಿಂದ ಆಕಾಶವಾಣಿ ಕಚೇರಿಯವರೆಗೆ ವಾಕಥಾನ್-೨೦೨೬ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮವನ್ನು ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯ ಉದ್ಘಾಟಿಸಲ್ಲಿದ್ದು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ದೀಪನ್ ಎಂ.ಎನ್ ಹಾಗೂ ಜಿಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ದಿಲೀಶ್ ಶಶಿ ಮತ್ತಿತರರು ಭಾಗವಹಿಸಲಿದ್ದಾರೆ.

*********

ವಿಜಯಪುರ ಜಿಲ್ಲೆಯಲ್ಲಿ ಕುಡಿಯುವ ನೀರಿಗೆ ಸಂಬಂಧಿಸಿದಂತೆ ಯಾವುದೇ ಸಮಸ್ಯೆಯಾಗದಂತೆ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಡಾ. ಆನಂದ ಕೆ. ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.ಸಮಸ್ಯೆ ಉಲ್ಬಣಿಸಿದರೆ ಆಯಾ ಇಲಾಖೆಯ ಅಧಿಕಾರಿಗಳನ್ನು ಸಂಪರ್ಕಿಸಿ ಸಮಸ್ಯೆಯನ್ನು ತಕ್ಷಣ ಇತ್ಯರ್ಥಪಡಿಸಿಕೊಳ್ಳಬೇಕು ಎಂದು ನಿರ್ದೇಶನ ನೀಡಿದ್ದಾರೆ.

*****END****